ಹೆದ್ದಾರಿಗಳಲ್ಲಿ ಸರ್ವೀಸ್ ರಸ್ತೆಗಳನ್ನು ನಿರ್ಮಿಸುವುದು

1770 (1999); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ರಾಜ್ಯದಲ್ಲಿ ರಸ್ತೆ ಟೋಲ್ ಸಂಗ್ರಹಿಸುವ ಮಾರ್ಗದ ಬದಲಾಗಿ ಸರ್ವಿಸ್ ರಸ್ತೆಗಳನ್ನು ನಿರ್ಮಿಸದಿರಲು ಕಾರಣವೇನು;

ಆ) ಟೋಲ್ ಶುಲ್ಕ ಸಂಗ್ರಹಕ್ಕೆ ಅನುಸರಿಸುವ ಮಾನದಂಡಗಳೇನು;

ಇ) ರಾಜ್ಯ ಹೆದ್ದಾರಿಯಲ್ಲಿ ಶುಲ್ಕ ವಸೂಲಿ ದಂಡ ಇವುಗಳಿಂದ ಸ್ಥಳೀಯರಿಗೆ ಅನಾನುಕೂಲವಾಗುತ್ತಿರುವುದರಿಂದ ಇದನ್ನು ತಪ್ಪಿಸಲು ಸರ್ವೀಸ್ ರಸ್ತೆಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು)

ಡಾ: ಹೆಚ್.ಸಿ. ಮಹದೇವಪ್ಪ (ಮಾನ್ಯ ಲೋಕೋಪಯೋಗಿ ಸಚಿವರು)

ಅ) ಟೋಲ್ ಸಂಗ್ರಹಿಸುತ್ತಿರುವ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಗುತ್ತಿಗೆ ಕರಾರಿನಂತೆ (Model Concession Agreement) ಸರ್ವೀಸ್ ರಸ್ತೆಯನ್ನು ನಿರ್ಮಿಸಲಾಗುತ್ತಿದೆ.

ಆ) ರಾಜ್ಯದಲ್ಲಿನ ರಾಷ್ಟ್ರೀಯ ಹೆದ್ದಾರಿ ಮತ್ತು ಕೆಲವು ರಾಜ್ಯ ಹೆದ್ದಾರಿಗಳಲ್ಲಿ, National Highways (collection of fees) Rule 1997 ಮತ್ತು National Highways Fees (Determination of Rates and collections) Rules 2008 ಮತ್ತು ಹಾಗೂ ತದನಂತರದ ತಿದ್ದುಪಡಿಗಳನ್ವಯ ಮತ್ತು ಕರ್ನಾಟಕ ರಾಜ್ಯ ಹೆದ್ದಾರಿ ಅಧಿನಿಯಮ, 1964 ದಲ್ಲಿನ ಮಾನದಂಡಗಳ ಆಧಾರದ ಮೇಲೆ ಟೋಲ್ ಶುಲ್ಕ ಸಂಗ್ರಹಿಸಲಾಗುತ್ತಿದೆ.

ಇ) ರಾಷ್ಟ್ರೀಯ ಹೆದ್ದಾರಿ ವಲಯ ಹಾಗೂ ಭಾರತೀಯ ರಾಷ್ಟ್ರೀಯ ಹೆದ್ದಾರಿಗಳ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬರುವ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಗುತ್ತಿಗೆ ಕರಾರಿನಂತೆ ಸರ್ವೀಸ್ ರಸ್ತೆಯನ್ನು ನಿರ್ಮಿಸಲಾಗುತ್ತಿದೆ. ರೈತರ ಟ್ರ್ಯಾಕ್ಟರ್‌ಗಳಿಗೆ, ದ್ವಿಚಕ್ರ ವಾಹನಗಳಿಗೆ

ಶುಲ್ಕದಿಂದ ವಿನಾಯಿತಿ, ಸ್ಥಳೀಯರ ವಾಹನಗಳಿಗೆ ಮಾಸಿಕ ಪಾಸ್‌ಗಳನ್ನು ನೀಡುವುದು ಮತ್ತು ಜಿಲ್ಲೆಯ ವಾಣಿಜ್ಯ ವಾಹನಗಳಿಗೆ ಶೇಕಡ 50 ರಷ್ಟು ರಿಯಾಯಿತಿಯನ್ನು ಟೋಲ್ ನಿಯಮಾವಳಿಗಳ ಅನನುಸಾರ ನೀಡಲಾಗುತ್ತಿದೆ.

110 KV ಸಬ್ ಸ್ಟೇಷನ್

1771 (2000); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಬಿರನಾಳ ಹಾಗೂ ಬೀರಡಿ ಗ್ರಾಮದಲ್ಲಿ 110 ಕೆ.ವಿ. ಸಬ್–ಸ್ಟೇಷನ್ ಮಂಜೂರಾತಿಗಾಗಿ ಪ್ರಸ್ತಾವನೆ ಸಲ್ಲಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಪ್ರಸ್ತಾವನೆ ಮಂಜೂರಾತಿಗಾಗಿ ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಡಿ.ಕೆ. ಶಿವಕುಮಾರ್ (ಇಂಧನ ಸಚಿವರು)

ಅ) ಮತ್ತು ಆ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಬಿರನಾಳ ಹಾಗೂ ಬೀರಡಿ ಗ್ರಾಮದಲ್ಲಿ 110 ಕೆ.ವಿ. ಸಬ್–ಸ್ಟೇಷನ್ ಸ್ಥಾಪಿಸುವ ಯಾವುದೇ ಪ್ರಸ್ತಾವನೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಮುಂದೆ ಇರುವುದಿಲ್ಲ.

ಕಬ್ಬು ಬೆಳೆದ ರೈತರ ಬಾಕಿ ಹಣ

1772 (2001); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳೆಷ್ಟು; (ಜಿಲ್ಲಾ ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು);

ಆ) ಪ್ರತಿ ವರ್ಷ ಈ ಕಾರ್ಖಾನೆಗಳಲ್ಲಿ ಉತ್ಪಾದಿಸಲಾಗುತ್ತಿರುವ ಸಕ್ಕರೆಯ ಪ್ರಮಾಣವೆಷ್ಟು; (ಕಾರ್ಖಾನೆಗಳವಾರು ವಿವರ ನೀಡುವುದು)